**ದಿನಾಂಕ: 18.06.2022 ರಂದು ಬೆಳಿಗ್ಗೆ 11.30ಕ್ಕೆ ನೋಡಲ್ ಅಧಿಕಾರಿಗಳ ಅಧ್ಯಕ್ಷತೆಯಲ್ಲಿ ವಾರ್ಡ್–178 (ಸಾರಕ್ಕಿ) ನಡೆದ ಸಭೆಯ ನಡಾವಳಿಗಳು:**

## : ಚರ್ಚೆಯಾದ ವಿಷಯಗಳು :

1. ವಾರ್ಡ್–178ರಲ್ಲಿನ ಸಾರ್ವಜನಿಕರ ಎಲ್ಲಾ ರೀತಿಯ ಕುಂದುಕೊರತೆಗಳ ಬಗ್ಗೆ, ಅಭಿವೃದ್ಧಿ ಕಾಮಗಾರಿಗಳು ಹಾಗೂ ಘನತ್ಯಾಜ್ಯ ನಿರ್ವಹಣೆ ಮತ್ತು ಕೊವಿಡ್–19ರ ಬಗ್ಗೆ ಚರ್ಚಿಸುವ ಕುರಿತು.
2. ಅಧ್ಯಕ್ಷರ ಅಪ್ಪಣೆಯ ಮೇರೆಗೆ ಚರ್ಚಿಸುವಂತಹ ಇತರೆ ವಿಷಯಗಳು.

## : ಸಭೆಗೆ ಹಾಜರಾಗಿದ್ದವರ ವಿವರಗಳು :

| | |
|---|---|
| ಅಧ್ಯಕ್ಷರು | ನೋಡಲ್ ಅಧಿಕಾರಿ |
| ಸದಸ್ಯ ಕಾರ್ಯದರ್ಶಿ | ವಾರ್ಡ್ 178ರ ಸಹಾಯಕ ಅಭಿಯಂತರರು |
| ಸದಸ್ಯರುಗಳು | ಹಿರಿಯ /ಕಿರಿಯ ಆರೋಗ್ಯ ಪರಿವೀಕ್ಷಕರು |
| ಸದಸ್ಯರುಗಳು | ಬೆಸ್ಕಾಂ |
| ಸದಸ್ಯರುಗಳು | ತೋಟಗಾರಿಕಾ ಇಲಾಖೆಯ ಅಧಿಕಾರಿಗಳು |
| ಸದಸ್ಯರುಗಳು | ಅರಣ್ಯ ಇಲಾಖೆ ಅಧಿಕಾರಿಗಳು |
| ಸದಸ್ಯರುಗಳು | ಕಂದಾಯ ಪರಿವೀಕ್ಷಕರು |
| ಸದಸ್ಯರುಗಳು | ಬಿಡಬ್ಲ್ಯೂಎಸ್ಎಸ್‌ಬಿ ಅಧಿಕಾರಿಗಳು |
| ಸದಸ್ಯರುಗಳು | ಜೆ.ಪಿ.ನಗರ ಪೊಲೀಸ್ ಠಾಣಾ ಅಧಿಕಾರಿಗಳು |
| ಸದಸ್ಯರುಗಳು | ವಾರ್ಡ್ 178 ರ UPHC ನ ವೈದ್ಯರು |
| ಸದಸ್ಯರುಗಳು | ಜೆ.ಪಿ.ನಗರ 2ನೇ ಹಂತ ನಾಗರೀಕ ಕಲ್ಯಾಣ ಸಂಘದ ಸದಸ್ಯರು ಹಾಗೂ ನಾಗರೀಕರು |
| ಸಾರ್ವಜನಿಕರು | ಮಾರ್ಷಲ್ |

## :ನಡಾವಳಿಯ ವರದಿ:

➢ ಅಧ್ಯಕ್ಷರು ಮಾತನಾಡುತ್ತಾ ಹಿಂದಿನ ಸಭೆಯಲ್ಲಿ ಚರ್ಚೆಯಾದ ವಿಷಯಗಳ ಬಗ್ಗೆ ಅಧಿಕಾರಿಗಳು ಕೈಗೊಂಡ ಕ್ರಮಗಳ ಬಗ್ಗೆ ಚರ್ಚಿಸಲಾಯಿತು.

**ಸದರಿ ಸಭೆಯಲ್ಲಿ ಕಸ ವಿಲೇವಾರಿ ಸಮಸ್ಯೆ ಹಾಗೂ ಇತರೇ ದೂರುಗಳ ಬಗ್ಗೆ ಕುರಿತು ಈ ಕೆಳಕಂಡಂತೆ ಪ್ರಸ್ತಾಪಿಸಲಾಯಿತು.**

➢ ಸಾರಕ್ಕಿ ವ್ಯಾಪ್ತಿಯ ಎಲ್ಲಾ ರಸ್ತೆಗಳಲ್ಲಿ ಪಾರ್ಕಿಂಗ್ ಮತ್ತು ನೋ–ಪಾರ್ಕಿಂಗ್ ಬೋರ್ಡ್‌ಗಳನ್ನು ಅಳವಡಿಸುವ ಬಗ್ಗೆ ಚರ್ಚಿಸಲಾಯಿತು.

ಕ್ರಮ : **ಜಯನಗರ ಸಂಚಾರಿ ಪೊಲೀಸ್ ಠಾಣೆ**

➢ 24ನೇ ಮುಖ್ಯರಸ್ತೆ ಹಾಗೂ 21ನೇ ಮುಖ್ಯರಸ್ತೆಯಲ್ಲಿ ಉದ್ಯಾನವನದಲ್ಲಿ ಶೌಚಾಲಯಗಳಿಗೆ ನೀರಿನ ಸಂಪರ್ಕವನ್ನು ಪೂರೈಸುವಂತೆ ಕೋರಿರುವ ಬಗ್ಗೆ.

ಕ್ರಮ : **ಸ.ಕಾ.ನಿ.ಅ., ಜೆ.ಪಿ.ನಗರ**

*ಪು.ತಿ.ನೋ.*

- ಪ್ರತಿ ವಾರ್ಡಿನಲ್ಲಿ ನಮ್ಮ ಕ್ಲಿನಿಕ್ ಯೋಜನೆಯನ್ನು ಅನುಷ್ಠಾನಗೊಳಿಸಲು ಅವಶ್ಯವಿರುವ ಖಾಲಿ ನಿವೇಶನ ಅಥವಾ ಕಟ್ಟಡ ಲಭ್ಯವಿರುವ ಬಗ್ಗೆ ಜೆ.ಪಿ.ನಗರ ಅಸೋಸಿಯೇಷನ್ಸ್ ನಿವಾಸಿಗಳು ಕೋರಿರುವ ಬಗ್ಗೆ.

**ಕ್ರಮ : ಆರೋಗ್ಯ ಇಲಾಖೆ, ಜಯನಗರ**

- 21ನೇ ಮುಖ್ಯರಸ್ತೆ ಹಾಗೂ 9ನೇ ಅಡ್ಡರಸ್ತೆಯಲ್ಲಿರುವ ಜಂಬೋ ಕಿಡ್ಸ್‌ನ ಹತ್ತಿರ ಹಾಕಲಾಗಿದ್ದ ಡೇಬ್ರೀಸ್‌ಅನ್ನು ತೆರವುಗೊಳಿಸುವ ಬಗ್ಗೆ ಚರ್ಚಿಸಲಾಯಿತು.
  1) ತೆರವುಗೊಳಿಸಲಾಗಿದೆ.

**ಕ್ರಮ : ಸ.ಕಾ.ನಿ.ಅ., ಜೆ.ಪಿ.ನಗರ ಉಪವಿಭಾಗ**

- ಧನ್ವಂತರಿ ಉದ್ಯಾನವನದಲ್ಲಿ ಮರದ ರೆಂಬೆ-ಕೊಂಬೆಗಳು ನೇತಾಡುತ್ತಿದ್ದು, ಅದನ್ನು ತೆರವುಗೊಳಿಸುವ ಬಗ್ಗೆ ಚರ್ಚಿಸಲಾಯಿತು.

**ಕ್ರಮ :ತೋಟಗಾರಿಕೆ ಇಲಾಖೆ (ದಕ್ಷಿಣ)**

- 23ನೇ ಮುಖ್ಯರಸ್ತೆ, ಜೆ.ಪಿ.ನಗರ 2ನೇ ಹಂತದಲ್ಲಿರುವ ಎಲೆಕ್ಟ್ರಿಕಲ್ ಕಂಬವನ್ನು ತೆರವುಗೊಳಿಸುವ ಬಗ್ಗೆ ಚರ್ಚಿಸಲಾಯಿತು.

**ಕ್ರಮ : ಸ.ಕಾ.ನಿ.ಅ. ಬೆಸ್ಕಾಂ**

- ವಾರ್ಡ್ ವ್ಯಾಪ್ತಿಯ ಬೀದಿ ದೀಪ ಕಂಬದ ವೈರ್‌ಗಳು ತೆರೆದ ವೈರ್‌ಗಳಾಗಿದ್ದು, ಅವುಗಳಿಗೆ ಸ್ವಿಚ್ ಬ್ಯಾಕ್ಸ್‌ಅನ್ನು ಅಳವಡಿಸುವ ಬಗ್ಗೆ ಚರ್ಚಿಸಲಾಯಿತು.

**ಕ್ರಮ : ಬೀದಿ ದೀಪ ನಿರ್ವಹಣೆ ವಿಭಾಗ**

- ಬ್ಲಾಕ್ ಸ್ಪಾಟ್‌ಅನ್ನು ತೆರವುಗೊಳಿಸಿರುವ ಬಗ್ಗೆ ಕಿರಿಯ ಆರೋಗ್ಯ ಪರಿವೀಕ್ಷಕರು ಹಾಗೂ ಮಾರ್ಷಲ್‌ರವರಿಗೆ ವಾರ್ಡ್ ಸಮಿತಿ ಸಭೆಯಲ್ಲಿ ಪ್ರಶಂಸೆಯನ್ನು ವ್ಯಕ್ತಪಡಿಸಿದರು.

- ಕೊನೆಯದಾಗಿ ಮಾನ್ಯ ಅಧ್ಯಕ್ಷರು ಸಭೆಗೆ ಹಾಜರಾದ ಎಲ್ಲಾ ಸದಸ್ಯರು ಮತ್ತು ಸಾರ್ವಜನಿಕರಿಗೆ ವಂದನೆಯನ್ನು ತಿಳಿಸುತ್ತಾ ಇನ್ನು ಮುಂದೆ ಪ್ರತಿ ತಿಂಗಳು ಮೊದಲ ಶನಿವಾರ ಹಾಗೂ ಮೂರನೇ ಶನಿವಾರ ಬೆಳಿಗ್ಗೆ 10.30 ಕ್ಕೆ ಇದೇ ರೀತಿಯಾಗಿ ಮಾಸಿಕ 2 ಬಾರಿ ವಾರ್ಡ್ ಸಮಿತಿ ಸಭೆ ನಡೆಯುವುದಾಗಿ ತಿಳಿಸಿ ಮುಂದಿನ ಸಭೆಗಳಿಗೆ ಈ ವಾರ್ಡಿನ ವ್ಯಾಪ್ತಿಗೆ ಬರುವ ಎಲ್ಲಾ ಇಲಾಖೆಗಳ ಅಧಿಕಾರಿಗಳನ್ನು ಸದರಿ ಸಭೆಗೆ ಮಾಹಿತಿಗಳೊಂದಿಗೆ ಹಾಜರಾಗುವಂತೆ ಕೋರಿ ಪತ್ರ ಬರೆಯಲು ಸದಸ್ಯ ಕಾರ್ಯದರ್ಶಿ ರವರಿಗೆ ಸೂಚಿಸಿದರು. ಹಾಗೂ ಗೈರು ಹಾಜರಾಗಿರುವ ಅಧಿಕಾರಿಗಳ ವಿರುದ್ಧ ಕ್ರಮ ಕೈಗೊಳ್ಳಲು ಮಾನ್ಯ ಆಯುಕ್ತರವರಿಗೆ ಸೂಚಿಸಲಾಗುವುದೆಂದು ತಿಳಿಸಿದರು.

- ಸದಸ್ಯ ಕಾರ್ಯದರ್ಶಿ ಹಾಗೂ ಸಹಾಯಕ ಇಂಜಿನಿಯರ್‌ರಾದ ಶ್ರೀ ಅಶ್ವತ್‌ರಾಮನ್ .ಆರ್, ವಾರ್ಡ್ 178 ಸಾರಕ್ಕಿ, ಸಭೆಗೆ ಹಾಜರಾದ ಎಲ್ಲಾ ಸದಸ್ಯರಿಗೂ ಹಾಗೂ ಅಧಿಕಾರಿಗಳು/ನೌಕರರಿಗೂ ವಂದನಾರ್ಪಣೆ ಸಲ್ಲಿಸುವುದರೊಂದಿಗೆ ಸಭೆಯನ್ನು ಮುಕ್ತಾಯಗೊಳಿಸಲಾಯಿತು.

**ಸದಸ್ಯ ಕಾರ್ಯದರ್ಶಿ**
**ಹಾಗೂ ವಾರ್ಡ್178 ರ ಸಹಾಯಕ ಅಭಿಯಂತರರು**
**ಬೃಹತ್ ಬೆಂಗಳೂರು ಮಹಾನಗರ ಪಾಲಿಕೆ**